# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ ಲೆಕ್ಕಶೀರ್ಷಿಕೆ:2515-00-102-0-08 ರಡಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

ಓದಲಾಗಿದೆ:

1. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆ, ಮೈಸೂರು ಇವರ ಪತ್ರ ಸಂ.SIRD/ACT/CR-05/2020-21, ದಿನಾಂಕ:15-04-2021.
2. ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಪಿಫ್‌ಪಿ 2021, ದಿನಾಂಕ:05-04-2021.

ಪ್ರಸ್ತಾವನೆ:

2021-22ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆಗೆ, ಪ್ರಾದೇಶಿಕ ಕೇಂದ್ರಗಳಾದ ಕಲುಬುರಗಿ ಮತ್ತು ಧಾರವಾಡ ಹಾಗೂ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ, ಬೆಂಗಳೂರು ಇಲ್ಲಿನ ಆಡಳಿತಾತ್ಮಕ ಮತ್ತು ಅಧಿಕಾರಿ/ಸಿಬ್ಬಂದಿಗಳ ವೇತನ ಲೆಕ್ಕ ಶೀರ್ಷಿಕೆ 2515-00-102-0-08ರ ಉಪ ಶೀರ್ಷಿಕೆ "101" (ಸಹಾಯಾನುದಾನ-ವೇತನಗಳು) ರಡಿ ರೂ.474.00 ಲಕ್ಷ, "103" (ಸಹಾಯಾನುದಾನ-ಸಾಮಾನ್ಯ) ರಡಿ ರೂ.101.00 ಲಕ್ಷ ಹಾಗೂ ಉಪ ಶೀರ್ಷಿಕೆ "115" (ಸಹಾಯಾನುದಾನ-ಗುತ್ತಿಗೆ/ಹೊರಗುತ್ತಿಗೆ) ರಡಿಯಲ್ಲಿ ರೂ.156.00 ಲಕ್ಷ ಮತ್ತು ಉಪ ಶೀರ್ಷಿಕೆ "386" (ನಿರ್ಮಾಣ) ರಡಿಯಲ್ಲಿ ರೂ.800.00 ಲಕ್ಷಗಳಂತೆ ಒಟ್ಟು ರೂ.1531.00 ಲಕ್ಷ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.

2021-22ನೇ ಸಾಲಿನಲ್ಲಿ ಸಂಸ್ಥೆಯ ಮತ್ತು ಸಂಸ್ಥೆಯ ಅಧೀನ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ವೇತನವನ್ನು ಪಾವತಿಸಲು ಮತ್ತು ಸಂಸ್ಥೆಯ ಸಾದಿಲ್ವಾರು ವೆಚ್ಚವನ್ನು ಭರಿಸಲು ಅನುದಾನದ ಅವಶ್ಯಕತೆಯಿರುವುದರಿಂದ, ಸಂಸ್ಥೆಗೆ ನಿಗಧಿಪಡಿಸಲಾಗಿರುವ ಒಟ್ಟು ಅನುದಾನದಲ್ಲಿ ಮಾರ್ಚ್-2021, ಏಪ್ರಿಲ್-2021, ಮೇ-2021 ಮತ್ತು ಜೂನ್-2021ರ ಮಾಹೆಗಳಿಗೆ ವೆಚ್ಚವನ್ನು ಭರಿಸಲು ಮೊದಲನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (1)ರ ದಿನಾಂಕ:15-04-2021ರ ಪತ್ರದನ್ವಯ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆ, ಮೈಸೂರು ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ(2)ರ ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಪಿಫ್‌ಪಿ 2021, ದಿನಾಂಕ:05-04-2021ರಲ್ಲಿ ಮೊದಲನೇ ಮತ್ತು ಎರಡನೇ ಕಂತಿನ ಹಣ ಬಿಡುಗಡೆಗೆ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.

Scanned with CamScanner

ಅದರಂತೆ, ಮೇಲೆ ಓದಲಾದ (1)ರ ದಿನಾಂಕ:15-04-2021ರ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆಯ ಪತ್ರದಲ್ಲಿ ಕೋರಲಾದಂತೆ, 2021-22ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ: 2515-00-102-0-08 ರಡಿ ರೂ.1531.00 ಲಕ್ಷಗಳ ಅನುದಾನದಲ್ಲಿ ಮೇಲೆ ಓದಲಾದ(2)ರ ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2021, ದಿನಾಂಕ:05-04-2021ರನ್ವಯ ಮೊದಲನೇ ಕಂತಿನ (ಏಪ್ರಿಲ್, ಮೇ & ಜೂನ್-2021) ಅನುದಾನವಾಗಿ ರೂ. 382.75 ಲಕ್ಷಗಳನ್ನು (ಮೂರು ನೂರು ಎಂಬತ್ತೆರಡು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆಗೆ ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 242 ಜಿಪಸ 2021, ದಿನಾಂಕ:31-05-2021.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ ಲೆಕ್ಕಶೀರ್ಷಿಕೆ 2515-00-102-0-08 ರಡಿ ರೂ.1531.00 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಿನ (ಏಪ್ರಿಲ್, ಮೇ & ಜೂನ್-2021) ಅನುದಾನವಾಗಿ ರೂ. 382.75 ಲಕ್ಷಗಳನ್ನು (ಮೂರು ನೂರು ಎಂಬತ್ತೆರಡು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಂಡ ಕೋಷ್ಟಕದನ್ವಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

| ಕ್ರ.ಸಂ | ಲೆಕ್ಕ ಶೀರ್ಷಿಕೆ | 2021-22ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನ (ರೂ. ಲಕ್ಷಗಳಲ್ಲಿ) | ಏಪ್ರಿಲ್-2021 ರಿಂದು ಜೂನ್-2021 ರವರೆಗೆ ಬಿಡುಗಡೆಗೊಳಿಸಿರುವ ಮೊದಲನೇ ತ್ರೈಮಾಸಿಕ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1. | 2515-00-102-0-08-101 ( ಸಹಾಯಾನುದಾನ-ವೇತನಗಳು ) | 474.00 | 118.5 |
| 2. | 2515-00-102-0-08-103 ( ಸಹಾಯಾನುದಾನ-ಸಾಮಾನ್ಯ ) | 101.00 | 25.25 |
| 3. | 2515-00-102-0-08-115 ( ಸಹಾಯಾನುದಾನ-ಗುತ್ತಿಗೆ/ ಹೊರಗುತ್ತಿಗೆ ) | 156.00 | 39.00 |
| 4. | 2515-00-102-0-08-386 (ನಿರ್ಮಾಣ) | 800.00 | 200.00 |
| ಒಟ್ಟು | | 1531.00 | 382.75 |

ಸದರಿ ಅನುದಾನವನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರ ಡಿಡಿಓ ಕೋಡ್:0900PH0015 ಗೆ ಖಜಾನೆ-2 ಮೂಲಕ ಬಿಡುಗಡೆಗೊಳಿಸಲು ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರಿಗೆ ಅಧಿಕಾರವನ್ನು ಪ್ರದತ್ತಗೊಳಿಸಲಾಗಿದೆ.

Scanned with CamScanner

ಈ ಆದೇಶವನ್ನು ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2021, ದಿನಾಂಕ:05-04-2021 ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 31/05/21
(ಬಿ.ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು ಜಿಲ್ಲೆ, ಮೈಸೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
8. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
9. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

Scanned with CamScanner